ಮೈಸೂರಿನ ಕೆ.ಜಿ.ಕೊಪ್ಪಲಿನಲ್ಲಿ ಓವರ್ ಹೆಡ್ ವಾಟರ್ ಟ್ಯಾಂಕ್ ನಿರ್ಮಾಣ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 98(320)

ಸದಸ್ಯರ ಹೆಸರು: ಶ್ರೀ ಹೆಚ್.ಎಸ್.ಶಂಕರಲಿಂಗೇಗೌಡ(ಚಾಮರಾಜ)

ಉತ್ತರಿಸುವ ಸಚಿವರು: ಶ್ರೀ ಬಿ.ಬಿ.ಚಿಮ್ಮನಕಟ್ಟಿ(ನಗರಾಭಿವೃದ್ಧಿ ಸಚಿವರು)

ಪ್ರಶ್ನೆ

ಅ) ಮೈಸೂರು ನಗರದ ಕನ್ನೇಗೌಡನ ಕೊಪ್ಪಲಿನ ಚಾಮರಾಜಪುರಂ ರೈಲ್ವೆ ಸ್ಟೇಷನ್ ಬಳಿ ಓವರ್‌ಹೆಡ್ ವಾಟರ್ ಟ್ಯಾಂಕ್ ನಿರ್ಮಾಣಕ್ಕೆ ಮಹಾನಗರ ಪಾಲಿಕೆ ನಿರ್ಣಯವನ್ನು ಸರ್ಕಾರದ ಅನುಮೋದನೆಗಾಗಿ ಸಲ್ಲಿಸಿದ್ದು ನಿಜವಲ್ಲವೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು?

ಉತ್ತರ

ಅ) ಹೌದು. ಸದರಿ ಪ್ರದೇಶಕ್ಕೆ ನೀರು ಸರಬರಾಜನ್ನು ಅಭಿವೃದ್ಧಿಪಡಿಸಲು ರೂ.14.00 ಲಕ್ಷಗಳ ಅಂದಾಜಿಗೆ ನಗರಪಾಲಿಕೆ ಕೌನ್ಸಿಲ್ ಅಧಿವೇಶನದ ನಡವಳಿಕೆ ಸಂ186:2000-01, ದಿನಾಂಕ:15-9-2000ದ ನಿರ್ಣಯವನ್ನು ಮಾಡಿ, ಸರ್ಕಾರದ ಆಡಳಿತಾತ್ಮಕ ಮಂಜೂರಾತಿಗಾಗಿ ಸಲ್ಲಿಸಿದ್ದು, ಸರ್ಕಾರವು ಪರಿಗಣಿಸಲಿದೆ.

ಆ) ಈ ಪ್ರಸ್ತಾವನೆಯ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತಿದೆ.

ಬೈಲಹೊಂಗಲ ನಗರದಲ್ಲಿ ಒಳಚರಂಡಿ ಯೋಜನೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 99(339)

ಸದಸ್ಯರ ಹೆಸರು: ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ)

ಉತ್ತರಿಸುವ ಸಚಿವರು: ಶ್ರೀ ಎಸ್.ಎಂ.ಕೃಷ್ಣ(ಮುಖ್ಯಮಂತ್ರಿಯವರು)

ಪ್ರಶ್ನೆ

1. ಬೆಳಗಾವಿ ಜಿಲ್ಲೆ ಬೈಲಹೊಂಗಲ ವಿಸ್ತರಣೆ ಪ್ರದೇಶದಲ್ಲಿ ಒಳಚರಂಡಿ ಯೋಜನೆ